# ಹೆತ್ತ ಮಗಳನ್ನೇ ಕೊಂದ ಮಾನಸಿಕ ಅಸ್ವಸ್ಥ ತಾಯಿ

## ನೀರಿನಲ್ಲಿ ಮುಳುಗಿಸಿ ಆತ್ಮಹತ್ಯೆಯ ಕಥೆ ಕಟ್ಟಿದಳು | ಆಸ್ಪತ್ರೆಯಲ್ಲಿ ಸಂಬಂಧಿಕರ ಗಲಾಟೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಾನಸಿಕ ಸ್ಥಿಮಿತ ಕಳೆದುಕೊಂಡಿದ್ದ ತಾಯಿಯೊಬ್ಬಳು ಹೆತ್ತ ಮಗಳನ್ನೇ ನೀರಿನ ತೊರೆಯಲ್ಲಿ ಮುಳುಗಿಸಿ ಹತ್ಯೆಗೈದಿರುವ ಹೃದಯ ವಿದ್ರಾವಕ ಘಟನೆ ತಾಲ್ಲೂಕಿನ ಜಿನ್ನೇನಹಳ್ಳಿ ಕೊಪ್ಪಲು ಗ್ರಾಮದಲ್ಲಿ ಭಾನುವಾರ ನಡೆದಿದೆ.

ಶಿವಮೊಗ್ಗದ ರಘು ಹಾಗೂ ಶ್ವೇತಾ ಎಂಬುವರ ಪುತ್ರಿ ಸಾನ್ವಿ (6) ಮೃತ ದುರ್ದೈವಿ. ಶ್ವೇತಾ ಅವರ ತವರು ಮನೆ ಜಿನ್ನೇನಹಳ್ಳಿ ಕೊಪ್ಪಲು ಗ್ರಾಮಸ್ಥರು ಘಟನೆಯಿಂದ ಬೆಚ್ಚಿ ಬಿದ್ದಿದ್ದಾರೆ.

ಶ್ವೇತಾ ಅವರ ತಂದೆ-ತಾಯಿ ಇಬ್ಬರೂ ನಿಧನರಾಗಿದ್ದು ಈಕೆಗೆ ಏಳು ಸಹೋದರಿಯರು. ಎಲ್ಲರೂ ಮದುವೆಯಾಗಿ ಗಂಡನ ಮನೆಯಲ್ಲಿದ್ದಾರೆ. ಆಗಾಗ ತವರು ಮನೆಗೆ ಬಂದು ಇರುವ ಜಮೀನನ್ನು ಅನುಭವಿಸುತ್ತಿದ್ದಾರೆ. ಹಬ್ಬ ಹರಿದಿನಗಳಲ್ಲಿ ಅಕ್ಕ-ತಂಗಿಯರು ಬಂದು ಹೋಗುತ್ತಿದ್ದರು. ತಂದೆ-ತಾಯಿ ನಿಧನ, ಗಂಡನ ಮನೆಯಲ್ಲಿ ಮನಸ್ತಾಪ ಹೀಗೆ ನಾನಾ ಕಾರಣಗಳಿಂದ ಗಂಡನಿಂದ ದೂರವಾಗಿದ್ದ ಶ್ವೇತಾ ಕಳೆದ ಐದು ವರ್ಷಗಳಿಂದ ಶಿವಮೊಗ್ಗ ಬಿಟ್ಟು ಬೆಂಗಳೂರು ಹಾಗೂ ಇತರ ಸಂಬಂಧಿಕರ ಮನೆಯಲ್ಲಿದ್ದು. ಪುತ್ರಿ ಸಾನ್ವಿ ಹುಟ್ಟಿನಿಂದಲೂ ತಂದೆ ಮನೆಯಲ್ಲೇ ಇತ್ತು. ಈ ನಡುವೆ ಗಂಡ ರಘುನಿಂದ ಶ್ವೇತಾ ವಿಚ್ಛೇದನಕ್ಕೆ ಮುಂದಾಗಿದ್ದಳು ಎನ್ನಲಾಗಿದೆ.

ಕಳೆದ ವರ್ಷ ಗ್ರಾಮದ ಹಿರಿಯರು ಸೇರಿ ಪಂಚಾಯಿತಿ, ರಾಜಿ ಸಂಧಾನದ ಮೂಲಕ ಗಂಡನ ಮನೆಗೆ ಕಳುಹಿಸಿಕೊಟ್ಟಿದ್ದರು. ಆದರೆ ಶಿವಮೊಗ್ಗದಲ್ಲಿ ಇರಲು ಸಾಧ್ಯವಾಗದೆ ಶನಿವಾರ ಮಗುವಿನೊಂದಿಗೆ ತವರಿಗೆ ಬಂದಿದ್ದಳು ಎನ್ನಲಾಗಿದೆ.

### ಕೈ ಮುಗಿದು ಬೇಡಿಕೊಂಡ ಮಗು

ಬಾಲ್ಯದಿಂದಲೂ ತಾಯಿಯಿಂದ ದೂರವಿದ್ದ ಸಾನ್ವಿ ಭಾನುವಾರ ಬೆಳಿಗ್ಗೆ ಜಮೀನಿಗೆ ಹೋಗಲು ಇಷ್ಟವಿಲ್ಲದೆ ತನ್ನನ್ನು ಕಾಪಾಡಿ ಎಂದು ಬೇಡಿಕೊಂಡಿದ್ದಳು. ಶಿವಮೊಗ್ಗಾದಿಂದಲೂ ಗಂಡನ ಮನೆಯವರ ಜೊತೆ ಜಗಳಾಡಿ ಪುತ್ರಿಯನ್ನು ಕರೆದುಕೊಂಡು ಬಂದಿದ್ದ ಶ್ವೇತಾ ಯಾವಾಗಲೂ ಹಲ್ಲೆ ಮಾಡುತ್ತಿದ್ದಳು. ಜಮೀನು ಕಡೆಗೆ ಹೋಗುವಾಗ ಮಗು ಕೈ ಮುಗಿದು ಕೇಳುತ್ತಿದ್ದುದು ಕರುಳು ಹಿಂಡುವಂತಿತ್ತು. ಆದರೆ ಶ್ವೇತಾ ಯಾರ ಮಾತು ಕೇಳುತ್ತಿರಲಿಲ್ಲ. ಹೀಗಾಗಿ ಮಗುವನ್ನು ಬಿಡಿಸಿಕೊಳ್ಳಲು ಸಾಧ್ಯವಾಗಲಿಲ್ಲ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದರು.



### ಬೇರೆಯವರ ಮನೆಯಲ್ಲಿ ವಾಸ

ಶನಿವಾರ ಶಿವಮೊಗ್ಗದಿಂದ ಬಂದಿದ್ದ ಶ್ವೇತಾಗೆ ತಮ್ಮ ಮನೆ ಕೀ ಸಿಗದ ಹಿನ್ನೆಲೆಯಲ್ಲಿ ಪಕ್ಕದ ಮನೆಯಲ್ಲಿ ವಾಸ್ತವ್ಯ ಹೂಡಿದ್ದಳು. ಭಾನುವಾರ ಬೆಳಿಗ್ಗೆ 9 ಗಂಟೆಗೆ ಜಮೀನು ಕಡೆಗೆ ಹೋಗುತ್ತೇನೆಂದು ಪುತ್ರಿ ಸಾನ್ವಿಯನ್ನು ಕರೆದುಕೊಂಡು ಹೋಗಿದ್ದಳು. ತಮ್ಮ ಜಮೀನಿನ ಪಕ್ಕದ ಕಟ್ಟೆ ಹತ್ತಿರ ಹರಿಯುತ್ತಿದ್ದ ನೀರಿನ ಗುಂಡಿ (ತೊರೆಗೆ) ಮಗಳನ್ನು ನೂಕಿ ಉಸಿರುಗಟ್ಟಿಸಿ ಕೊಲ್ಲಲು ಪ್ರಯತ್ನಿಸಿದ್ದಾಳೆ. ಮಗು ಜೋರಾಗಿ ಅತ್ತು ಸುಸ್ತಾದ ಹಿನ್ನೆಲೆ ಮಗುವನ್ನು ಅಲ್ಲೇ ಬಿಟ್ಟು ಊರಿಗೆ ದೌಡಾಯಿಸಿದ್ದಾಳೆ. ನಾನು ಮಗು ಇಬ್ಬರೂ ಸಾಯಲು ಪ್ರಯತ್ನಿಸಿದ್ದೆವು. ನನಗೆ ಜೀವನ ಸಾಕು ಮಗಳು ನಾನು ಸಾಯಬೇಕು. ಮಗು ಕಟ್ಟೆಗೆ ಬಿದ್ದಿದ್ದಾಳೆ ಎಂದು ಸುಳ್ಳು ಹೇಳಿದ್ದಾಳೆ.

ತಕ್ಷಣವೇ ಗ್ರಾಮಸ್ಥರು ಸ್ಥಳಕ್ಕೆ ದೌಡಾಯಿಸಿದ್ದಾರೆ. ಮಗುವನ್ನು ನೀರಿನಿಂದ ಹೊರ ತೆಗೆದ ಜನರು ಬಾಲಕಿಯನ್ನು ಎತ್ತಿಕೊಂಡ ಪ್ರಾಣ ಉಳಿಸಲು ಪ್ರಯತ್ನಿಸಿದರಾದರೂ ಆಸ್ಪತ್ರೆಗೆ ಕರೆತರುವಷ್ಟರಲ್ಲೇ ಪ್ರಾಣಬಿಟ್ಟಿದೆ.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಹಿರೀಸಾವೆ ಠಾಣೆ ಪೊಲೀಸರು ಶ್ವೇತಾಳನ್ನು ವಶಕ್ಕೆ ಪಡೆದಿದ್ದಾರೆ. ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ಹಿಮ್ಸ್‌ಗೆ ರವಾನಿಸಲಾಯಿತು. ಹಿರೀಸಾವೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಪಿಎಸ್ಐ ತಳ್ಳಿದ ರಘು ಸ್ನೇಹಿತ



ಚನ್ನರಾಯಪಟ್ಟಣ ತಾಲ್ಲೂಕು ಜಿನ್ನೇನಹಳ್ಳಿ ಕೊಪ್ಪಲು ಗ್ರಾಮದಲ್ಲಿ ಸಂಭವಿಸಿದ ಬಾಲಕಿ ಸಾನ್ವಿ ಸಾವು ಪ್ರಕರಣ ಸಂಬಂಧ ಹಿಮ್ಸ್‌ನ ಶವಾಗಾರದಲ್ಲಿ ನಡೆದ ಎರಡೂ ಕುಟುಂಬಸ್ಥರ ಗಲಾಟೆ ವೇಳೆ ಹಿರೀಸಾವೆ ಪಿಎಸ್ಐ ರೂಪಾ ಬಿರಾದಾರ್ ಅವರನ್ನು ಯುವಕನೊಬ್ಬ ತಳ್ಳಿದ ಘಟನೆ ನಡೆಯಿತು.

ಮೃತ ಬಾಲಕಿಯ ಶವವನ್ನು ಮರಣೋತ್ತರ ಪರೀಕ್ಷೆಗೆ ತಂದಿದ್ದಾಗ ಅಲ್ಲಿಗೆ ಶಿವಮೊಗ್ಗದಿಂದ ಬಂದ ಬಾಲಕಿ ತಂದೆ ರಘು ಹಾಗೂ ಸಂಬಂಧಿಕರು ಶ್ವೇತಾ ಕುಟುಂಬಸ್ಥರ ಜೊತೆ ಗಲಾಟೆ ಶುರು ಮಾಡಿದರು. ನಾನು ಜೈಲಿಗೆ ಹೋದರು ಚಿಂತೆಯಿಲ್ಲ ಅವಳನ್ನ (ಹೆಂಡತಿ ಶ್ವೇತಾ) ಕೊಲೆ ಮಾಡಿಯೇ ತೀರುತ್ತೇನೆಂದು ರಘು ಜೋರು ಧ್ವನಿಯಲ್ಲಿ ಬೈಯುತ್ತಿದ್ದಾಗ ಶ್ವೇತಾ ಕಡೆಯವರು ಆತನ ಮೇಲೆ ಹಲ್ಲೆಗೆ ಮುಂದಾದರು.

ಆಗ ಎರಡೂ ಗುಂಪುಗಳ ನಡುವೆ ಗಲಾಟೆ ಶುರುವಾಗಿ ಶಿವಮೊಗ್ಗದಿಂದ ಬಂದಿದ್ದ ಯುವಕನೊಬ್ಬ ಇನ್ನೊಬ್ಬನಿಗೆ ಹೊಡೆಯುತ್ತಿದ್ದಾಗ ಹಿಂದಿನಿಂದ ಬಂದ ಪಿಎಸ್ಐ ರೂಪಾ ಅವರು, ಯುವಕನ ಬೆನ್ನಿಗೆ ಹೊಡೆದಾಗ ಏಕಾಏಕಿ ತಿರುಗಿದ ಆತ ಯಾರೆಂದು ತಿಳಿಯದೆ ಜೋರಾಗಿ ತಳ್ಳಿದ. ಅದರಿಂದ ಆಕ್ರೋಶಗೊಂಡ ಪಿಎಸ್ಐ ಆತನನ್ನು ವಶಕ್ಕೆ ಪಡೆಯುವಂತೆ ಸಿಬ್ಬಂದಿಗೆ ಸೂಚಿಸಿದರು.

ತಪ್ಪಾಯಿತು ಮೇಡಂ ನೀವು ಅಂತ ಗೊತ್ತಾಗಲಿಲ್ಲ ಎಂದು ಯುವಕ ಗೋಗರೆದ ಪ್ರಸಂಗ ನಡೆಯಿತು.

## ಮುಸುಕಿನ ಜೋಳಕ್ಕೆ ಬಿಳಿಸುಳಿ ರೋಗ: ಹತೋಟಿಗೆ ಸೂಚನೆ



ಹಾಸನ: ಮುಸುಕಿನ ಜೋಳಕ್ಕೆ ತಗುಲಿರುವ ಬಿಳಿಸುಳಿ ರೋಗ ಬಾಧೆ ಹತೋಟಿಗೆ ಕೃಷಿ ಇಲಾಖೆ ಅಧಿಕಾರಿಗಳು ತುರ್ತು ಕ್ರಮ ಕೈಗೊಳ್ಳಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಸೂಚಿಸಿದರು.

ನಗರದ ಕೃಷಿ ಇಲಾಖೆಯಲ್ಲಿ ಬಿಳಿ ಸುಳಿ ರೋಗಕ್ಕೆ ಸಂಬಂಧಿಸಿ ಕೃಷಿ ಇಲಾಖೆ ಅಧಿಕಾರಿಗಳು, ವರ್ತಕರೊಂದಿಗೆ ಸೋಮವಾರ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ, ಬಿಳಿಸುಳಿ ರೋಗದ ಬಗ್ಗೆ ಹಾಗೂ ಹತೋಟಿ ಕ್ರಮಗಳ ಗ್ರಾಮ ಪಂಚಾಯಿತಿ ಮಟ್ಟದಿಂದ ಮಾಹಿತಿ ನೀಡುವ ಕೆಲಸವಾಗಬೇಕು. ರೋಗ ನಿಯಂತ್ರಣಕ್ಕೆ ಬೇಕಾದ ಔಷಧ ಪೂರೈಕೆ ಬಗ್ಗೆ ಸಮರ್ಪಕ ಮಾಹಿತಿ ನೀವಂತೆ ತಿಳಿಸಿದರು.

ಕೃಷಿ ಜಂಟಿ ನಿರ್ದೇಶಕ ಡಾ.ರಮೇಶ್ ಕುಮಾರ್ ಮಾತನಾಡಿ, ಜಿಲ್ಲೆಗೆ ಅಂದಾಜು 10 ಸಾವಿರ ಕ್ವಿಂಟಾಲ್ ಬಿತ್ತನೆ ಮುಸುಕಿನ ಜೋಳದ ಅಗತ್ಯವಿದೆ. ಶೇ.95 ರಷ್ಟು ಖಾಸಗಿ ಸಂಸ್ಥೆಗಳಿಂದಲೇ ಬಿತ್ತನೆ ಬೀಜ ಮಾರಾಟ ಮಾಡಲಾಗುತ್ತದೆ. ಕೃಷಿ ಇಲಾಖೆಯಿಂದ ಈ ವರೆಗೆ ಶೇ.5ರಷ್ಟು ಮಾತ್ರ ಬಿತ್ತನೆ ಬೀಜ ವಿತರಣೆ ಮಾಡಿದ್ದೇವೆ. ಈ ವರ್ಷ ಹೆಚ್ಚಿನ ಪ್ರಮಾಣದಲ್ಲಿ ಬಿಳಿಸುಳಿ ರೋಗ ಕಾಣಿಸಿಕೊಂಡಿರುವುದರಿಂದ ಹತೋಟಿ ಕ್ರಮಗಳ ಬಗ್ಗೆ ಬಿತ್ತಿಪತ್ರಗಳ ಮೂಲಕ ರೈತರಿಗೆ ಜಾಗೃತಿ ಮೂಡಿಸುವ ಕೆಲಸವಾಗಿದೆ. ಅಲ್ಲದೇ 143 ಗ್ರಾಮಗಳಲ್ಲಿ ರೈತರೊಂದಿಗೆ ಸಭೆ ನಡೆಸಿ ಮಾಹಿತಿ ನೀಡುವ ಕೆಲಸ ಮಾಡಿದ್ದೇವೆ ಎಂದು ತಿಳಿಸಿದರು.

ಈವರೆಗೂ 34 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮುಸುಕಿನ ಜೋಳ ಬಿತ್ತನೆ ಮಾಡಲಾಗಿದೆ. ಇದರಲ್ಲಿ 8 ಸಾವಿರಕ್ಕೂ ಹೆಚ್ಚಿನ ಪ್ರದೇಶದಲ್ಲಿ ಬಿತ್ತನೆ ಮಾಡಿದ್ದ ಬೆಳೆಯಲ್ಲಿ ಬಿಳಿ ಸುಳಿ ರೋಗ ಕಾಣಿಸಿಕೊಂಡಿದೆ. ಹಾಸನ ತಾಲ್ಲೂಕಿನ 6 ಸಾವಿರ ಹೆಕ್ಟೇರ್, ಹೊಳೆನರಸೀಪುರ ತಾಲ್ಲೂಕಿನಲ್ಲಿ 1 ಸಾವಿರ ಹೆಕ್ಟೇರ್‌ಗೂ ಹೆಚ್ಚಿನ ಪ್ರದೇಶದಲ್ಲಿ ಈ ರೋಗ ಕಾಣಿಸಿಕೊಂಡಿದೆ ಎಂದು ತಿಳಿಸಿದರು.

## 6 ತಿಂಗಳಲ್ಲಿ ಕನಕ ಪತ್ತಿನ ಸಹಕಾರ ಸಂಘ ಉದ್ಘಾಟನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಶ್ರೀ ಕನಕ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡಕ್ಕೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಶಾಸಕ ಹೆಚ್.ಪಿ. ಸ್ವರೂಪ್ ಹೇಳಿದರು.

ಭಾನುವಾರ ಕಚೇರಿಗೆ ಭೇಟಿ ನೀಡಿದ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ಪ್ರತಿಯೊಂದು ಕೆಲಸ ಶುರುವಾಗುವಾಗ ಚಿಕ್ಕದಾಗಿಯೇ ಇರುತ್ತದೆ. ಭಗವಂತ ನಮಗೆ ಶಕ್ತಿ ಕೊಟ್ಟಿರುವುದರಿಂದ ಸಮಾಜದ ಅಭಿವೃದ್ಧಿಗೆ ನೆರವಾಗಬೇಕಾಗುತ್ತದೆ. ನಮ್ಮ ತಂದೆ ನಾಲ್ಕು ಬಾರಿ ಶಾಸಕರಾಗಿದ್ದು ಸಮುದಾಯದ ಬೆಂಬಲ ಅವರಿಗೆ ಹೆಚ್ಚಾಗಿತ್ತು. ಅದೇ ರೀತಿ ವಿಶ್ವಾಸವಿಟ್ಟು ನನ್ನ ಗೆಲುವಿಗೆ ಕಾರಣಕರ್ತರಾಗಿದ್ದೀರಿ. ಸಮುದಾಯದ ಋಣ ನಮ್ಮ ಮೇಲಿದೆ ಎಂದರು.

ಎಲ್ಲರೂ ಒಟ್ಟಾಗಿ ಮುಂದಿನ ಆರು ತಿಂಗಳಲ್ಲಿ ಕಟ್ಟಡ ಕಾಮಗಾರಿ ಪೂರ್ಣಗೊಳಿಸೋಣ. ರಾಜಕಾರಣ ಹೊರತುಪಡಿಸಿ ಎಲ್ಲರೂ ಒಟ್ಟಾಗಿ ಇರೋಣ. ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಹಸ್ತಕ್ಷೇಪ ಮಾಡುವುದು ಬೇಡ. ಆರ್ಥಿಕ ಮತ್ತು ರಾಜಕೀಯವಾಗಿ ಸಮುದಾಯ ಅಭಿವೃದ್ಧಿ ಸಾಧಿಸಲಿ ಎಂದು ಆಶಿಸಿದರು.

ಶ್ರೀ ಕನಕ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ನಿರ್ಮಾಣ ಕಾಮಗಾರಿಗೆ ಇತ್ತೀಚೆಗಷ್ಟೆ ಗುದ್ದಲಿ ಪೂಜೆ ನೆರವೇರಿದ್ದು, ಸಂಪೂರ್ಣ ವೆಚ್ಚವನ್ನು ಶಾಸಕ ಹೆಚ್.ಪಿ. ಸ್ವರೂಪ್ ವಹಿಸಿರುವುದಾಗಿ ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ. ಶಾಸಕರ ಸಹಕಾರ ನಡೆ, ಸಂಘದ ಬೆಳವಣಿಗೆಗೆ ಅವರು ನೀಡುತ್ತಿರುವ ನಿಷ್ಠೆಯ ಸಂಕೇತವಾಗಿದೆ. ಸಂಘದ ಅಭಿವೃದ್ಧಿಯತ್ತ ಅವರ ದಿಟ್ಟ ಹೆಜ್ಜೆ ನಮಗೆ ಪ್ರೇರಣಾದಾಯಕವಾಗಿದೆ ಎಂದು ಶ್ಲಾಘಿಸಿದ್ದಾರೆ.

ಸಂಘದ ಅಧ್ಯಕ್ಷ ಸಿ.ಆರ್. ಸಂತೋಷ್, ನವಿಲೆ ಅಣ್ಣಪ್ಪ, ಕೃಷ್ಣೇಗೌಡ, ಕೇಶವಮೂರ್ತಿ, ನಾಗರಾಜು, ಸುರೇಶ್, ದಿವಾಕರ್ ಗೌಡ, ಪ್ರಸನ್ನ ಕುಮಾರ್, ಬನವಾಸೆ ಸತೀಶ್, ಗಿರೀಶ್, ಹೇಮಂತ ಮತ್ತಿತರರು ಶಾಸಕರನ್ನು ಸನ್ಮಾನಿಸಿದರು.

## ಸಾವಯವ ಕೃಷಿಯಿಂದ ಮಣ್ಣಿನ ಜೀವಸತ್ವ ರಕ್ಷಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಕೃಷಿಕರು ಮಣ್ಣಿನ ಜೀವಸತ್ವ ಉಳಿಸಲು ಸಾವಯವ ಕೃಷಿ ಕಡೆ ಹೆಚ್ಚಿನ ಗಮನ ನೀಡಬೇಕು ಎಂದು ಹಾಸನ ಆಕಾಶವಾಣಿ ಮುಖ್ಯಸ್ಥ ಡಾ. ವಿಜಯ ಅಂಗಡಿ ಹೇಳಿದರು.

ತಾಲ್ಲೂಕಿನಲ್ಲಿ ಹೆಬ್ಬಾಳು ಗ್ರಾಮದ ಉದ್ಯಮಿ ಸುಧಾಕರ್ ಅವರ ತೋಟದ ಮನೆ ಆವರಣದಲ್ಲಿ ಹಮ್ಮಿಕೊಂಡಿದ್ದ ಕೃಷಿ ಸಮಾರಂಭದಲ್ಲಿ ಪ್ರಗತಿಪರ ಗಣ್ಯರಿಗೆ ಸನ್ಮಾನಿಸಿ ಮಾತನಾಡಿ, ಇತ್ತೀಚಿನ ದಿನದಲ್ಲಿ ಬಹುತೇಕ ರೈತಾಪಿ ವರ್ಗ ರಾಸಾಯಿನಿಕ ಕೃಷಿಗೆ ಉತ್ತೇಜನ ನೀಡುತ್ತಾ ಬಂದಿದ್ದಾರೆ. ಇದರಿಂದ ಮಣ್ಣಿನ ಜೀವಕಣದ ಮೇಲೆ ಕೆಟ್ಟ ಪರಿಣಾಮ ಹಾಗೂ ಜೊತೆಗೆ ಮಾನವ ಆರೋಗ್ಯದ ಮೇಲೆ ಮಾರಕ ಪರಿಣಾಮ ಉಂಟಾಗುತ್ತಿದೆ. ಆದ್ದರಿಂದ ಕೃಷಿಕರು ಮಣ್ಣಿನ ಜೀವಸತ್ವ ಉಳಿಸಲು ಸಾವಯವ ಕೃಷಿ ಕಡೆ ಹೆಚ್ಚಿನ ಗಮನ ನೀಡಬೇಕಾಗಿದೆ. ಬದಲಾದ ಜೀವನಶೈಲಿ ಮಾನವ ದೇಹದ ಮೇಲೆ ಪ್ರತಿಕೂಲ ಪರಿಣಾಮ ಉಂಟು



ಮಾಡಲಿವೆ ಎಂಬವುದಕ್ಕೆ ಸಾಕ್ಷಿ ಇತ್ತೀಚಿನ ದಿನಗಳಲ್ಲಿ ಜನರು ಆಸ್ಪತ್ರೆಗೆ ಅಲೆಯುತ್ತಾ ಹಣ ವ್ಯಯ ಮಾಡುತ್ತಿದ್ದಾರೆ. ರಾಗಿ ಉತ್ತಮ ಆಹಾರ, ಆದರೆ ರಾಗಿ ಬೆಳೆ ದಿನಕಳೆದಂತೆ ಇಳಿಮುಖವಾಗುತ್ತಿದೆ. ಬಿಳಿ ಅಕ್ಕಿ ಆರೋಗ್ಯಕ್ಕೆ ಹಾನಿ ಎಂದು ತಿಳಿದರೂ ಜನರು ಮಾತ್ರ ಬಾಯಿರುಚಿಗೆ ಮಾರು ಹೋಗುತ್ತಿದ್ದಾರೆ. ಹೆಬ್ಬಾಳು ಸುಧಾಕರ್ ವ್ಯಾಸಂಗದ ಬಳಿಕ ಬೆಂಗಳೂರಿನಲ್ಲಿ ಗ್ಯಾರೇಜ್ ಒಂದರಲ್ಲಿ ಕೆಲಸ ಮಾಡಿದ ಹುಡುಗ ಶ್ರೇದ್ದೆಯಿಂದ ಇಂದು ಮಾರುತಿ ಶೋರಂ ಸ್ಥಾಪಿಸಿ ಸಾವಿರ ಜನರಿಗೆ ಉದ್ಯೋಗ ನೀಡಿದ್ದಾರೆ. ಅವರು ಉದ್ಯಮಿಯ ಜೊತೆಗೆ ತಮ್ಮ ಪೋಷಕರು ಉಳಿಸಿಕೊಂಡು ಬಂದ ಕೃಷಿಭೂಮಿಗೆ ಪುಷ್ಠಿ ನೀಡುವ ನಿಟ್ಟಿನಲ್ಲಿ ಕೆಲಸ ಮಾಡುತ್ತಾ ಇಂದು ತೋಟದ ಮನೆಯಲ್ಲಿಯೇ ಕೃಷಿ ಕಾರ್ಯಕ್ರಮ ಏರ್ಪಡಿಸಿ ಹತ್ತಾರು ಪ್ರಗತಿಪರ ಕೃಷಿಕರನ್ನು ಸನ್ಮಾನಿಸಿದ್ದಾರೆ ಎಂದರು.

ಬೇಲೂರು ತಾಲ್ಲೂಕು ಜೆಡಿಎಸ್ ಅಧ್ಯಕ್ಷ ತೊ.ಚ. ಅನಂತಸುಬ್ಬರಾಯ ಮಾತನಾಡಿ, ಹೆಬ್ಬಾಳು ಅಪ್ಪಣ್ಣಯ್ಯ ಕುಟುಂಬ ವರ್ಗ ಆರ್ಥಿಕವಾಗಿ ಸಬಲರಾಗಿದ್ದು, ಅಪ್ಪಣ್ಣಯ್ಯ ಅವರ ಟ್ರಸ್ಟ್ ಸ್ಥಾಪಿಸಿ ವಿದ್ಯಾರ್ಥಿಗಳ ಓದಿಗೆ ಸಹಕಾರ ನೀಡಬೇಕು ಎಂದು ಸಲಹೆ ನೀಡಿದರು. ನಿವೃತ್ತ ತಹಸೀಲ್ದಾರ್ ವಿರೂಪಾಕ್ಷಯ್ಯ ಮಾತನಾಡಿ, ನಾನು ಬೇಲೂರಿನಲ್ಲಿ ತಹಸೀಲ್ದಾರಾಗಿ ಕರ್ತವ್ಯ ನಿರ್ವಹಿಸಿದ ಸಂದರ್ಭದಲ್ಲಿ ಯಗಚಿ ಮುಳುಗಡೆ ಸಂತ್ರಸ್ತರಿಗೆ ಭೂಮಿ ಮತ್ತು ಇನ್ನು ಮುಂತಾದ ಕೆಲಸ ಮಾಡಿದ್ದು, ಹತ್ತಾರು ಮಂತ್ರಿಗಳಲ್ಲಿ ಅಪ್ತ ಕಾರ್ಯದರ್ಶಿಯಾಗಿ ಕೆಲಸ ನಿರ್ವಹಿಸಿದ ಬಗ್ಗೆ ತಿಳಿಸಿದರು.

ರಾಜ್ಯ ಕೃಷಿಕ ಸಮಾಜ ಪ್ರತಿನಿಧಿ ಬಿ.ಎಂ.ದೊಡ್ಡವೀರೇಗೌಡ ಮಾತನಾಡಿ ಹೆಬ್ಬಾಳಿನ ಬಸವಯ್ಯ, ನಿಲಮ್ಮ, ಮಕ್ಕಳಾದ ಅಪ್ಪಣ್ಣಯ್ಯ, ಹಾಲಪ್ಪಯ್ಯ ಹಾಗೂ ರುದ್ರಪ್ಪನವರ ಸಮಾಜಕ್ಕೆ ತಮ್ಮದೆ ಕೊಡುಗೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಅವರು ನೆನಪು ಅರ್ಥಪೂರ್ಣವೆಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ಜವಳಿ-ಸಕ್ಕರೆ ಮತ್ತು ಕೃಷಿ ಮಾರಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿ ಕೆ.ಸಿ.ವಿರೂಪಾಕ್ಷ, ಹೆಚ್.ಜಿ. ಮಲ್ಲೇಗೌಡ, ಮೂಳೆನಹಳ್ಳಿ ರೇವಣ್ಣಯ್ಯ, ಹೆಚ್.ಬಿ. ಚಂದ್ರಶೇಖರಯ್ಯ, ಪ್ರಸಾದ್, ಶಿವೇಗೌಡ, ಪರ್ವತಮಲ್ಲೇಗೌಡ, ನಂಜೇಗೌಡ, ಹೆಚ್.ಜಿ. ಭುವನೇಶ್, ಹೆಬ್ಬಾಳು ಹಾಲಪ್ಪ, ರೇಣುಕಯ್ಯ, ಷಡಕ್ಷರಿ, ಅಭಿಲಾಷ್, ಜಗದೀಶ್ ಇತರರಿದ್ದರು.

## ಶ್ರವಣ ತಪಾಸಣೆ ಶಿಬಿರ: 100 ಜನರು ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರೋಟರಿ ಕ್ಲಬ್ ಆಫ್ ಹಾಸನ ಸೆಂಟ್ರಲ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಟೀಂ ಈಶ್ವರ್ ಮಲ್ಪೆ ಅವರ ನೇತೃತ್ವದಲ್ಲಿ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಭಾನುವಾರ ಏರ್ಪಡಿಸಿದ್ದ ಶ್ರವಣ ಉಚಿತ ತಪಾಸಣೆ ಹಾಗೂ ರಿಯಾಯಿತಿ ದರದಲ್ಲಿ ಶ್ರವಣ ಯಂತ್ರಗಳ ವಿತರಣೆ ಸಮಾರಂಭಕ್ಕೆ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಯಿತು.

100ಕ್ಕೂ ಹೆಚ್ಚು ಜನರು ಬಂದಿದ್ದರಾದರೂ ಮೊದಲ ದಿನ 48 ಜನರ ತಪಾಸಣೆ ನಡೆಯಿತು. ಸೋಮವಾರವು ಶಿಬಿರ ಮುಂದುವರೆಯಲಿದೆ. ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಹೆಚ್.ಬಿ.



ಮದನಗೌಡ ಮಾತನಾಡಿ, ಮನುಷ್ಯನಿಗೆ ಶ್ರವಣ ಅತ್ಯಂತ ಮುಖ್ಯ ಅಂಗವಾಗಿದ್ದು ಅದರ ರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಹೇಳಿದರು. ನಮ್ಮ ಸುತ್ತಮುತ್ತಲಿನ ವಿದ್ಯಮಾನ ಅರಿಯಲು ಹಾಗೂ ಇನ್ನೊಬ್ಬರೊಂದಿಗೆ ಸಂವಹನ ನಡೆಸಲು ಕಿವಿ ಪ್ರಮುಖ ಪಾತ್ರ ವಹಿಸುತ್ತದೆ. ಪ್ರಸ್ತುತ ಮನುಷ್ಯ ಒತ್ತಡದಲ್ಲೇ ಬದುಕುತ್ತಿದ್ದಾನೆ. ಆರೋಗ್ಯಕ್ಕೆ ಸಮಯ ನೀಡುವಷ್ಟು ವ್ಯವಧಾನ ಇಲ್ಲವಾಗಿದೆ. ಶ್ರವಣದೋಷ ಕಂಡುಬಂದರೆ ವೈದ್ಯರನ್ನು ಭೇಟಿಯಾಗಬೇಕು. ಇಲ್ಲವಾದರೆ ಇನ್ನಿತರ ಆರೋಗ್ಯ ಸಮಸ್ಯೆಗಳಿಗೂ ಆಹ್ವಾನ ನೀಡಿದಂತಾಗುತ್ತದೆ ಎಂದರು.

ಒಕ್ಕಲಿಗರ ಸಂಘದ ನಿರ್ದೇಶಕ ರಘುಗೌಡ ಮಾತನಾಡಿ, ರೋಟರಿ ಕ್ಲಬ್ ಆಫ್ ಸೆಂಟ್ರಲ್ ಸಂಸ್ಥೆ ಜನಸ್ನೇಹಿ ಕೆಲಸಗಳ ಮೂಲಕ ಮೆಚ್ಚುಗೆಗೆ ಪಾತ್ರವಾಗಿದೆ ಎಂದರು. ಟೀಂ ಈಶ್ವರ್ ಮಲ್ಪೆ ತಂಡದ ಲವಬಂಗೇರಾ, ಡಾ. ಪವನ ಕುಮಾರ್, ರೋ. ನಿರ್ಮಲ್ ಕುಮಾರ್, ಮಂಜುನಾಥ್, ರೋಟರಿ ಕ್ಲಬ್ ಆಫ್ ಮಿಟರನ್ ಅಧ್ಯಕ್ಷ ಡಾ. ತೇಜಸ್ವಿ, ರೋಟರಿ ಕ್ಲಬ್ ಆಫ್ ಸೆಂಟ್ರಲ್ ಅಧ್ಯಕ್ಷ ಎಂ.ಡಿ. ನಾಗೇಶ್, ಕಾರ್ಯದರ್ಶಿ ಅಶೋಕ್, ಸದಸ್ಯರಾದ ಬಿ.ಆರ್. ಬೊಮ್ಮೇಗೌಡ, ಕೆ.ಎಲ್. ರಮೇಶ್, ಯೋಗೀಶ್ ಗೌಡ, ಪರಮೇಶ್, ಸದಸ್ಯ ಪ್ರಕಾಶ್, ಪತ್ರಕರ್ತ ನಾಗರಾಜ್ ಹೆತ್ತೂರು ಮತ್ತು ಇತರರಿದ್ದರು.

## ಕಾಲ್ತುಳಿತ ಪ್ರಕರಣ: ಪೊಲೀಸ್ ವೈಫಲ್ಯವಿದೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಆರ್‌ಸಿಬಿ ವಿಜಯೋತ್ಸವ ವೇಳೆ ಸಂಭವಿಸಿದ ಕಾಲ್ತುಳಿತದ ಸಾವು-ನೋವಿನ ಮಾಹಿತಿಯನ್ನು ಪೊಲೀಸ್ ಅಧಿಕಾರಿಗಳು ಆರಂಭದಲ್ಲೇ ಮುಖ್ಯಮಂತ್ರಿ ಗಮನಕ್ಕೆ ತರಬೇಕಿತ್ತು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಪೊಲೀಸ್ ಅಧಿಕಾರಿಗಳ ಅಮಾನತು ನಿರ್ಧಾರವನ್ನು ಸಮರ್ಥಿಸಿಕೊಂಡರು.

ಸಂಸದ ಶ್ರೇಯಸ್ ಪಟೇಲ್ ಅವರ ನಿವಾಸದಲ್ಲಿ ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಐಪಿಎಲ್ ವಿಜಯೋತ್ಸವ ವೇಳೆ ನಡೆದ ಅಹಿತಕರ ಘಟನೆ ಕುರಿತು ಸಾಕಷ್ಟು ಗೊಂದಲಗಳಿವೆ. ಸರ್ಕಾರ ಈಗಾಗಲೇ ನಿವೃತ್ತ ನ್ಯಾಯಾಧೀಶರು, ಸಿಐಡಿ, ಬೆಂಗಳೂರು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶಿಸಿದೆ. ಯಾವುದಾದರೂ ಒಂದು ತನಿಖಾ ವರದಿ ಬರುವ ವರೆಗೆ ಏನನ್ನೂ ಹೇಳಲು ಸಾಧ್ಯವಿಲ್ಲ. ಬೆಂಗಳೂರಿನಲ್ಲಿ ನಡೆದಿರುವ ಘಟನೆ ಕುರಿತು ಹೊಳೆನರಸೀಪುರದಲ್ಲಿ ಕುಳಿತು ಹೀಗೇ ಅಂತ ಹೇಳಲು ಸಾಧ್ಯವಿಲ್ಲ ಎಂದರು.



ಕಾಲ್ತುಳಿತದಲ್ಲಿ 11 ಜನರು ಮೃತಪಟ್ಟಿರುವುದಕ್ಕೆ ನಮಗೂ ಮರುಕವಿದೆ. ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು ಅವರ ಸಲಹೆ ಮೇರೆಗೆ ಕಾರ್ಯಕ್ರಮ ಆಯೋಜಿಸಲಾಗಿತ್ತು ಎಂಬ ಆರೋಪಗಳು ಕೇಳಿಬಂದ ಹಿನ್ನಲೆಯಲ್ಲಿ ಅವರನ್ನು ಸ್ಥಾನದಿಂದ ಮುಖ್ಯಮಂತ್ರಿ ವಜಾ ಮಾಡಿದ್ದಾರೆ. ಕಾರ್ಯಕ್ರಮಕ್ಕೆ ಬೆಂಗಳೂರು ನಗರ ಪೊಲೀಸ್ ಕಮಿಷನರ್, ಅಧೀನ ಅಧಿಕಾರಿಗಳು ಅನುಮತಿ ನೀಡಿದ್ದರಾ ಅಥವಾ ಇಲ್ಲವಾ ಎಂಬುದರ ಬಗ್ಗೆ ತನಿಖೆಯಿಂದ ಮಾಹಿತಿ ತಿಳಿಯಬೇಕು ಎಂದು ಹೇಳಿದರು.

ಕಾರ್ಯನಿಮಿತ್ತ ಮೈಸೂರಿಗೆ ತೆರಳುತ್ತಿದ್ದ ಸಚಿವ ಸತೀಶ್ ಜಾರಕಿಹೊಳಿ ಕುಟುಂಬಸ್ಥರನ್ನು ಪಟ್ಟಣದ ಜಯಚಾಮರಾಜೇಂದ್ರ ವೃತ್ತದ ಮಹಾತ್ಮ ಗಾಂಧಿ ಪ್ರತಿಮೆ ಬಳಿ ಹೂಮಳೆ ಸುರಿಯುವ ಮೂಲಕ ಕಾಂಗ್ರೆಸ್ ಕಾರ್ಯಕರ್ತರು ಸ್ವಾಗತಿಸಿದರು.

ಚಿಕ್ಕೋಡಿ ಸಂಸದೆ ಹಾಗೂ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಾಂಕ, ಪುತ್ರ ರಾಹುಲ್ ಜಾರಕಿಹೊಳಿ ಅವರಿಗೆ ಅದ್ದೂರಿ ಸ್ವಾಗತ ಕೋರಲಾಯಿತು. ಸಂಸದ ಶ್ರೇಯಸ್ ಪಟೇಲ್ ಮನೆಯಲ್ಲಿ ಭೋಜನ ಸೇವಿಸಿ ಅವರು ಮೈಸೂರಿಗೆ ಪ್ರಯಾಣ ಬೆಳೆಸಿದರು.

ಮಾಜಿ ಸಂಸದ ಬಿ.ಎನ್. ಚಂದ್ರಪ್ಪ, ಮುಖಂಡರಾದ ಅನುಪಮಾ ಮಹೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ. ಲಕ್ಷ್ಮಣ್, ದುದ್ದ ಹೋಬಳಿ ಕಾಂಗ್ರೆಸ್ ಅಧ್ಯಕ್ಷ ವಿಶ್ವನಾಥ್, ಬಾಗಿವಾಳು ಬಸವರಾಜ್, ಪುರಸಭೆ ಮಾಜಿ ಅಧ್ಯಕ್ಷ ಪುಟ್ಟರಾಜ್ ಇತರರು ಹಾಜರಿದ್ದರು.

### ಅನುದಾನಕ್ಕೆ ಕೊರತೆ ಇಲ್ಲ

ಲೋಕೋಪಯೋಗಿ ಇಲಾಖೆ ಕೆಲಸಗಳು ಸುಗಮವಾಗಿ ನಡೆಯುತ್ತಿವೆ. 10 ಸಾವಿರ ಕೋಟಿ ರೂ. ವೆಚ್ಚದಲ್ಲಿ ವಿವಿಧ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಮಳೆ ಕುಸಿತದಿಂದ ರಸ್ತೆ ಹಾನಿಗೀಡಾಗಿರುವ ಶಿರಾಡಿಘಾಟ್, ಮೂಡಿಗೆರೆ ಹಾಗೂ ಚಿಕ್ಕಮಗಳೂರಿಗೆ ಭೇಟಿ ನೀಡಲಾಗಿದೆ. ಮಳೆ ಬಂದಾಗ ಭೂಕುಸಿತವಾಗುತ್ತದೆ. ಸಮಸ್ಯೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು ಅಭಿವೃದ್ಧಿಗೆ ಅನುದಾನದ ಕೊರತೆಯಿದೆ ಎಂಬ ಆರೋಪ ಸತ್ಯಕ್ಕೆ ದೂರವಾದುದು ಎಂದರು.

ಕಾಂಗ್ರೆಸ್ ಮೇಲೆ ನಂಬಿಕೆಯಿಟ್ಟು ಜಿಲ್ಲೆಯ ಜನರು ಸಂಸದ ಶ್ರೇಯಸ್ ಪಟೇಲ್ ಅವರನ್ನು ಸಂಸದರನ್ನಾಗಿ ಆಯ್ಕೆ ಮಾಡಿದ್ದಾರೆ. ಈ ಭಾಗದಲ್ಲಿ ಹೆಚ್ಚು ಕೆಲಸ ಮಾಡಬೇಕೆಂಬ ಹಂಬಲ ನಮಗೂ ಇದೆ ಎಂದರು.

## ಇತಿಹಾಸದಲ್ಲಿ ಈ ದಿನ

### ಜೂನ್ -10

1946: ಗೋವಾ ಸ್ವಾತಂತ್ರ್ಯ ಹೋರಾಟದಲ್ಲಿ ಜಯಪ್ರಭೋಧ ಜಾತೀನ್ ಲೋಹಿಯಾ ಮತ್ತು ಇತರರು Assolna ಗೆ ಆಗಮಿಸಿದರು.

1857: ಜನಂಗೊಂಡೆ ಚೇನಾ ಕೋರಣೆ ನಂದನಾವನು ಕೊನೆಗಿರಿಸಿದ ಮುತಿನಿಯ ಹಠವನ್ನು ನೆನಪು ಮಾಡುತ್ತದೆ.

**ಜನನ**

1938: ರಾಹುಲ್ ಬಜಾಜ್ (ಐಎಂಎಫ್ ಉದ್ಯಮಿ)

1972: ಸುಂದರ್ ಪಿಚೈ (ಅಲ್ಪಬೆಟ್/ಗೂಗಲ್ )

1977: ಮಿಕೆ ಸಿಂಗ್, ಗಾಯಕ

**ಮರಣ**

2019: ನಟ-ನಾಟಕಕಾರ ಗಿರೀಶ್ ಕಾರ್ನಾಡ್

## ಬಸ್‌ಗಳಲ್ಲಿ ಮುಂದುವರೆದ ಸರಗಳ್ಳತನ

ಹಾಸನ: ಕೆಎಸ್‌ಆರ್‌ಟಿಸಿ ಬಸ್ ಹತ್ತುವಾಗ ಮಹಿಳೆಯರ ಚಿನ್ನಾಭರಣ ದೋಚುವ ಪ್ರಕರಣಗಳು ಮರುಕಳಿಸುತ್ತಿದ್ದು, ನಗರ ಠಾಣೆ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ಪ್ರಕರಣದಲ್ಲಿ 2.18 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳುವಾಗಿದೆ.

ಅರಸೀಕೆರೆ ತಾಲ್ಲೂಕು ಗಂಡಸಿ ಹ್ಯಾಂಡ್ ಪೋಸ್ಟ್ ನಿವಾಸಿ ಪ್ರಿಯಾಂಕ ಎಂಬುವರ 1.68 ಲಕ್ಷ ರೂ. ಮೌಲ್ಯದ ಚಿನ್ನದ ಸರವನ್ನು ಮೇ 28 ರಂದು ನಗರದ ಬಸ್ ನಿಲ್ದಾಣದಲ್ಲಿ ಕಳವು ಮಾಡಲಾಗಿದೆ. ಕಾರ್ಯ ನಿಮಿತ್ತ ಅರಸೀಕೆರೆಯಿಂದ ಗಂಡಸಿಗೆ ತೆರಳಲು ಬಸ್ ಹತ್ತುತ್ತಿದ್ದಾಗ ಗಮನಕ್ಕೆ ಬಾರದಂತೆ ಕೊರಳಿನಿಂದ ಸರ ಕದಿಯಲಾಗಿದೆ. ಅರಸೀಕೆರೆ ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಹಾಸನದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಮಹಿಳೆಯ ವ್ಯಾನಿಟಿ ಬ್ಯಾಗ್‌ನಿಂದ 50 ಸಾವಿರ ರೂ. ಮೌಲ್ಯದ ಚಿನ್ನದ ಸರ ದೋಚಲಾಗಿದೆ.

ಮಡಿಕೇರಿಯ ಸವಿತಾ ಅವರು ಮೇ 24 ರಂದು ಚಿಕ್ಕಮಗಳೂರಿಗೆ ತೆರಳಲು ಪ್ಲಾಟ್ ಫಾರಂ ನಂಬರ್ 15ರಲ್ಲಿ ನಿಂತಿದ್ದಾಗ ಬಸ್ ಹತ್ತಲು ಮುಂದಾಗಿದ್ದರಾದರೂ ಜನದಟ್ಟಣೆ ಹೆಚ್ಚಿದ್ದರಿಂದ ವಾಪಾಸ್ ಬಂದಿದ್ದರು. ಆ ಸಮಯದಲ್ಲೇ ಗಮನಕ್ಕೆ ಬಾರದಂತೆ ವ್ಯಾನಿಟಿ ಬ್ಯಾಗ್ ಎಗರಿಸಿದ್ದಾರೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರವಾಸಿಗರಿಂದ ಸ್ಥಳೀಯರಿಗೆ ತೊಂದರೆ: ಕ್ರಮಕ್ಕೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲ್ಲೂಕಿನ ಹೆತ್ತೂರು ಹೋಬಳಿಯ ಚೀರಿ ಚಿನ್ನಹಳ್ಳಿ ಗ್ರಾಮದ ರಾಸ್ತಾ ಹೋಂ ಸ್ಟೇಗೆ ಆಗಮಿಸುವ ಪ್ರವಾಸಿಗರ ಕಿರಿಕಿರಿಯಿಂದ ಸಾರ್ವಜನಿಕರು, ರೈತರು ಮತ್ತು ಮಹಿಳೆಯರಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿ ಗ್ರಾಮಸ್ಥರು ಸೋಮವಾರ ಉಪವಿಭಾಗಾಧಿಕಾರಿಗೆ ದೂರು ಸಲ್ಲಿಸಿದರು.



ಪ್ರವಾಸಿಗರು ರಜಾ ದಿನಗಳಲ್ಲಿ ರಸ್ತೆಗೆ ಅಡ್ಡಲಾಗಿ ಕಾರು ಮತ್ತು ಜೀಪ್‌ಗಳನ್ನು ನಿಲ್ಲಿಸಿ ಅಭಿಗಂಡಿ ಫಾಲ್ಸ್‌ನಲ್ಲಿ ಮದ್ಯಪಾನ ಮಾಡಿ ಅಮಲಿನಲ್ಲಿ ಮೋಜು ಮಸ್ತಿ ಮಾಡುತ್ತಾರೆ. ಇದರಿಂದ ಸಾರ್ವಜನಿಕರಿಗೆ ಕಿರಿಕಿರಿ ಹಾಗೂ ಓಡಾಟದಲ್ಲಿ ತೊಂದರೆಯಾಗುತ್ತಿದೆ. ಇದಲ್ಲದೆ ಪ್ರವಾಸಿಗರು ರಸ್ತೆ, ಕೃಷಿ ಭೂಮಿ ಮತ್ತು ಜಲಪಾತದ ಸುತ್ತಮುತ್ತ ಮದ್ಯದ ಬಾಟಲಿ ಎಸೆದು ಪರಿಸರ ಹಾಳು ಮಾಡುತ್ತಿದ್ದಾರೆ. ಸ್ಥಳೀಯರಾದ ಕಿರಣ್ ಮತ್ತು ಪ್ರಜ್ವಲ್ ಈ ಬಗ್ಗೆ ಪ್ರವಾಸಿಗರನ್ನು ಪ್ರಶ್ನಿಸಿದಾಗ, ಕಿರಣ್‌ಗೆ ಮುಖ ಮೂತಿ, ಕಿವಿಯಿಂದ ರಕ್ತ ಬರುವಂತೆ ಗಂಭೀರವಾಗಿ ಹಲ್ಲೆ ಮಾಡಲಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದರೂ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳದೆ ನಿರ್ಲಕ್ಷ್ಯ ತೋರಿದ್ದಾರೆ ಎಂದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248